<u>**ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ..... ಚಿತ್ತಾಪೂರ**</u>

C.C No. 62/2017
CW- 10 PW-6

ಹೆಸರು ಃ ಪ್ರಶಾಂತಕುಮಾರ ಮುಗಟಾ

ತಂದೆ ಹೆಸರು ಃ ಅಮೃತರಾವ

ವಯಸ್ಸು ಃ 35 ವರ್ಷ

ಉದ್ಯೋಗ ಃ ಒಕ್ಕಲುತನ

ವಾಸ ಸ್ಥಳ ಃ ಚಂದನಕೇರಾ, ತಾ: ಚಿಂಚೋಳಿ.

---

<u>**ಪ್ರಮಾಣವಚನ ಭೋಧಿಸಲಾಯಿತು. ದಿಃ 12-03-2025**</u>

<u>**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರಿಂದ**</u>

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ಇರುವುದಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ.

2016ನೇ ಇಸ್ವಿಯಲ್ಲಿ ನನ್ನ ಬೊಲೆರೋ ಪಿಕ್ ಆಫ್ ವಾಹನ ಅಪಘಾತಕ್ಕೀಡಾಗಿದ್ದು, ಸದರಿ ವಾಹನವನ್ನು ನಾನು ಮಾಡಬೂಳ ಪೊಲೀಸ ಠಾಣೆಗೆ ಭೇಟಿ ನೀಡಿ, ನನ್ನ ವಶಕ್ಕೆ ಪಡೆದುಕೊಂಡಿರುತ್ತೇನೆ. ನಾನು ನನ್ನ ವಾಹನವನ್ನು ವಶಕ್ಕೆ ಪಡೆಯುವಾಗ, ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ. ಅಪಘಾತ ಯಾರ ತಪ್ಪಿನಿಂದ ಆಯಿತು ಮತ್ತು ಹೇಗೆ ಆಯಿತು ಎಂದು ನನಗೆ ಗೊತ್ತಿರುವುದಿಲ್ಲ.

ಸಾಕ್ಷಿಯು ಇಂಡೆಮನಿಟಿ ಬಾಂಡನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಶಾನೆ ಪಿ-6 ಎಂದು ಸಹಿಯನ್ನು ನಿಶಾನೆ ಪಿ-6(ಎ) ಎಂದು ಗುರುತಿಸಲಾಯಿತು.

(ಮಾನ್ಯ ಸ ಸ ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ದಾಖಲೆಗಳನ್ನು ಪರಿಶೀಲಿಸಿ ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು.)

<u>**ಪಾಟೀ ಸವಾಲುಃ ಸ.ಸ.ಅಭಿಯೋಜಕರವರಿಂದ**</u>

ದಿನಾಂಕ: 07-10-2016ರಂದು ರಾತ್ರಿ 10-20 ನಿಮಿಷಕ್ಕೆ ನ್ಯಾಯಾಲಯದ ಮುಂದಿರುವ ಆರೋಪಿಯು ನನ್ನ ಬೊಲೆರೋ ಪಿಕ ಆಫ್ ವಾಹನ ಸಂಖ್ಯೆ: ಕೆಎ-32/ಸಿ-1306ನೇದ್ದನ್ನು ಅತಿ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಮೋಟಾರ ಸೈಕಲ್ ಸಂಖ್ಯೆ: ಕೆಎ-25/ಕ್ಯೂ-8522ನೇದ್ದಕ್ಕೆ ಡಿಕ್ಕಿಪಡಿಸಿದ್ದರ ಪರಿಣಾಮ ಸದರಿ ಮೋಟಾರ ಸೈಕಲನ ಸವಾರ ಮತ್ತು ಹಿಂಬದಿ ಸವಾರರಿಗೆ

ತೀವ್ರ ಸ್ವರೂಪದ ರಕ್ತಗಾಯಗಳಾಗಿ ಅವರು ಮೃತಪಟ್ಟಿರುವ ವಿಷಯವನ್ನು ಆರೋಪಿಯು ನನಗೆ ತಿಳಿಸಿರುತ್ತಾನೆ ಎಂದರೆ ಸರಿಯಲ್ಲ. ದಿನಾಂಕ: 21-12-2016ರಂದು ನಾನು ಈ ಪ್ರಕರಣದಲ್ಲಿ ಪೊಲೀಸರಿಗೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು ನಿಶಾನೆ ಪಿ-7 ಎಂದು ಗುರುತಿಸಲಾಯಿತು. ನಿಶಾನೆ ಪಿ-7ರಲ್ಲಿ ಬರೆದಿರುವ ವಿಷಯಗಳು ನನಗೆ ಗೊತ್ತಿರುತ್ತವೆ ಎಂದರೆ ಸರಿಯಲ್ಲ. ಆರೋಪಿಯೇ ಸದರಿ ದಿನ ನನ್ನ ಬೊಲೆರೋ ವಾಹನವನ್ನು ಚಾಲನೆ ಮಾಡುತ್ತಿದ್ದರೂ ಅವನಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ. ವಕೀಲರಿಂದ - ಏನು ಇಲ್ಲಾ**

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)

ಓ. ಹೇ ಕೇ.ಸರಿ ಇದೆ.

ಸಿವಿಲ್ & J.M.F.C ನ್ಯಾಯಾಧೀಶರು, ಚಿತ್ತಾಪೂರ.